**ಪ್ರಧಾನ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ಹರಿಹರ**

**ಸಿ ಸಿ ನಂ. 739/2023**

| | | |
|---|---|---|
| ಹೆಸರು | ಮಧು | PW -3 |
| ತಂದೆ ಹೆಸರು | ರಾಜಪ್ಪ | CW -4 |
| ವಯಸ್ಸು | 27 ವರ್ಷ | |
| ಉದ್ಯೋಗ | ವ್ಯವಸಾಯ | ದಿನಾಂಕಃ 24.10.2024 |
| ವಾಸ | ಗೆದ್ಲಹಟ್ಟಿ ಗ್ರಾಮ | |

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಖ್ಯ ವಿಚಾರಣೆ ಸಸಅ ರವರಿಂದ ಃ**

ಚಾಸಾ 5 ರಿಂದ 7 ರವರ ಪರಿಚಯ ಇಲ್ಲ, ಮೃತ ಸಂದೀಪ ರವರ ಪರಿಚಯ ಇಲ್ಲ. ಆರೋಪಿತರನ್ನು ನಾನು ನೋಡಿಲ್ಲ. ನನಗೆ ಸದರಿ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ, ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ, ಅದು ಸ್ಥಳ ಮತ್ತು ಅಮಾನತ್ತು ಪಂಚನಾಮೆ ಆಗಿದ್ದು, ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸುತ್ತಾರೆ. ಸದರಿ ದಾಖಲೆಯನ್ನು ಈಗಾಗಲೇ ನಿಪಿ 2 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ 2(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಯಾವಾಗ ಮಾಡಿರುತ್ತೇನೆ ಮತ್ತು ಎಲ್ಲಿ ಮಾಡಿರುತ್ತೇನೆ ಎಂದು ನನಗೆ ನೆನಪಿಲ್ಲ. ಯಾವ ಕಾರಣಕ್ಕಾಗಿ ಸಹಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ಸಾಕ್ಷಿಗೆ ಎರಡು ಛಾಯಾಚಿತ್ರಗಳನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿ ತಾನು ಇರುವುದನ್ನು ಗುರುತಿಸುತ್ತಾರೆ. ಸದರಿ ಛಾಯಾಚಿತ್ರಗಳನ್ನು ಈಗಾಗಲೇ ನಿಪಿ 3 ಮತ್ತು 4 ಎಂದು ಗುರುತಿಸಲಾಗಿದೆ. ನಿಪಿ 3 ಮತ್ತು 4 ನ್ನು ಪೊಲೀಸರು ತೆಗೆದಿರುತ್ತಾರೆ. ಯಾವ ಕಾರಣಕ್ಕಾಗಿ ತೆಗೆಯಲಾಯಿತು ಎಂದು ನನಗೆ ಗೊತ್ತಿಲ್ಲ.

(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎ.ಪಿ.ಪಿ ಯವರು ಕೋರಿದ್ದು, ಸಂಗತಿಗಳನ್ನು ಪರೀಶಿಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟಿ ಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲು ಶ್ರೀ ಎ.ಪಿ.ಪಿ. ಯವರಿಂದಃ**

ದಿನಾಂಕ 07.02.2023 ರಂದು ಮಧ್ಯಾಹ್ನ 2.00 ಗಂಟೆ ಸಮಯದಲ್ಲಿ ಸಂದೀಪನು ನೀರು ಬಿಡಲು ವಾಲ್ ಆನ್ ಮಾಡಲು ಹೋದಾಗ ವಾಲ ಕಿಟಕಿ ಹತ್ತಿರ ಇದ್ದು, ಕಿಟಕಿಯನ್ನು ಮುಟ್ಟಿ ವಾಲ್ ಆನ್ ಮಾಡಿದಾಗ ಸಂದೀಪನಿಗೆ ವಿದ್ಯುತ್ ಶಕ್ತಿಯ ಶಾಕ್ ತಗಲಿದಾಗ ಅಲ್ಲಿಯೇ ಇದ್ದ ಪ್ಲಾಸ್ಟಿಕ್ ಪೈಪ್ ಮೂಲಕ ಸಂದೀಪನನ್ನು ಹಿಂದಕ್ಕ ಎಳೆದುಕೊಂಡೆವು ಎಂದರೆ ಸರಿಯಲ್ಲ. ನಂತರ ನಾವು ರೈಸ್ ಮಿಲ್ ವಾಹನದಲ್ಲಿ ಸಂದೀಪನು ಚಿಕಿತ್ಸೆಗಾಗಿ ದಾವಣಗೆರೆಯ ಚಿಗಟೇರಿ ಆಸ್ಪತ್ರೆಗೆ ಹೋಗಿದ್ದು, ಅಲ್ಲಿನ ವೈದ್ಯರು ಸಂದೀಪನು ಮೃತಪಟ್ಟಿರುತ್ತಾನೆ ಎಂದು ತಿಳಿಸಿದರು ಎಂದರೆ ಸರಿಯಲ್ಲ. ಸದರಿ ಅವಘಡವು ಆಕಾಶ ರೈಸ್ ಮಿಲ್ ಮಾಲೀಕರಾದ ಸುರೇಶ, ಗುಮಾಸ್ತರಾದ ಬಸಪ್ಪ ಹಾಗೂ ಗಿರೀಶ್ ರವರು ಯಾವುದೇ

ಮುಂಜಾಗ್ರತಾ ಕ್ರಮ ಕೈಗೊಳ್ಳದೇ ನಿರ್ಲಕ್ಷತನ ಮತ್ತು ಬೇಜಾವಾಬ್ದಾರಿ ತೋರಿಸಿದ್ದರಿಂದ ಆಗಿರುತ್ತದೆ ಎಂದರೆ ಸರಿಯಲ್ಲ. ಈ ವಿಚಾರವಾಗಿ ಪೊಲೀಸರು ಸ್ಥಳಕ್ಕೆ ಬಂದು ನಿಪಿ 2 ರಂತೆ ಪೊಲೀಸರು ಚಾಸಾ 2 ಮತ್ತು ಚಾಸಾ 3 ರವರ ಸಮಕ್ಷಮ ಪಂಚನಾಮೆ ಜರುಗಿಸಿ ನಿಪಿ 3 ಮತ್ತು 4 ರಂತೆ ಛಾಯಾಚಿತ್ರಗಳನ್ನು ತೆಗೆಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆಯನ್ನು ಬೆಳಿಗ್ಗೆ 10.15 ರಿಂದ 11.00 ಗಂಟೆವರೆಗೆ ಜರುಗಿಸಲಾಗಿರುತ್ತದೆ ಎಂದರೆ ಸರಿಯಲ್ಲ. ಈ ವಿಚಾರವಾಗಿ ಪೊಲೀಸರ ಮುಂದೆ ಈಗ ಓದಿ ಹೇಳಿದಂತೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯು ನಿರಾಕರಿಸಿದ ಹೇಳಿಕೆಯನ್ನು ನಿಪಿ 5 ಎಂದು ಗುರುತಿಸಲಾಯಿತು. ಪ್ರಕರಣಕ ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ.**

**ಮರುವಿಚಾರಣೆ ಇಲ್ಲಃ**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಪಡಿಸಿದೆ)

ಓ ಹೇ ಕೇ ಸರಿ ಇದೆ

Sd/-

ಸಿ/ಸಿ ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಮ್‌ಎಫ್ ಸಿ ನ್ಯಾಯಾಲಯ, ಹರಿಹರ.